## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಯೋಜನೆಗಳ ಅಡಿಯಲ್ಲಿ ಸರ್ಕಾರಿ ಆಸ್ಪತ್ರೆ/ಖಾಸಗಿ ಆಸ್ಪತ್ರೆಗಳು ಸ್ವೀಕರಿಸಿದ ಹಣವನ್ನು ಉಪಯೋಗಿಸಲು ಹೊರಡಿಸಲಾಗಿದ್ದ ಪರಿಷ್ಕೃತ ಮಾರ್ಗಸೂಚಿಗಳ ಕುರಿತ ಆದೇಶವನ್ನು ಹಿಂತೆಗೆದುಕೊಳ್ಳುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶದ ಸಂಖ್ಯೆ: ಆಕುಕ 66 ಸಿಜಿಇ 2017, ದಿನಾಂಕ:21-04-2017.
2) ಸರ್ಕಾರದ ಆದೇಶ ಸಂಖ್ಯೆ: ಆಕುಕ 91 ಸಿಜಿಇ 2017, ದಿನಾಂಕ: 01-03-2018.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರದ ಆದೇಶದಲ್ಲಿ, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಮುಖಾಂತರ ಅನುಷ್ಠಾನಗೊಳ್ಳುತ್ತಿದ್ದ ವಿವಿಧ ಯೋಜನೆಗಳಡಿಯಲ್ಲಿ, ಸರ್ಕಾರಿ ಆಸ್ಪತ್ರೆ ಮತ್ತು ಖಾಸಗಿ ಆಸ್ಪತ್ರೆಗಳಿಂದ ಸ್ವೀಕೃತವಾಗುತ್ತಿದ್ದ ಹಣವನ್ನು ಬಳಕೆ ಮಾಡುವ ಬಗ್ಗೆ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲಾಗಿತ್ತು. ಸದರಿ ಆದೇಶದನ್ವಯ ವೈದ್ಯರು ಹಾಗೂ ಅರೆ ವೈದ್ಯಕೀಯ ಸಿಬ್ಬಂದಿ ಶೇಕಡ 30 ರಷ್ಟನ್ನು ಪ್ರೋತ್ಸಾಹ ಧನವನ್ನು ನೀಡಲಾಗುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಸರ್ಕಾರದ ಆದೇಶದಲ್ಲಿ, ಎಲ್ಲಾ ಸಾಮಾಜಿಕ ಆರೋಗ್ಯ ವಿಮಾ ಯೋಜನೆಗಳನ್ನು ಒಂದೇ ಆರೋಗ್ಯ ಭರವಸೆ ಯೋಜನೆಯಡಿ ವಿಲೀನಗೊಳಿಸಿ, ಕರ್ನಾಟಕ ರಾಜ್ಯದ ಎಲ್ಲಾ ನಿವಾಸಿಗಳಿಗೆ "ಆರೋಗ್ಯ ಕರ್ನಾಟಕ " ಎನ್ನುವ ಹೊಸ ಯೋಜನೆಯ ಮೂಲಕ ನಿರ್ದಿಷ್ಟ ಪಡಿಸಿದ ಪ್ರಾಥಮಿಕ ಪ್ರಾಥಮಿಕ ಆರೋಗ್ಯ ಆರೈಕೆ, ಸಾಮಾನ್ಯ ದ್ವಿತೀಯ ಹಂತದ ಆರೋಗ್ಯ ಆರೈಕೆ, ಸಂಕೀರ್ಣ ದ್ವಿತೀಯ ಹಂತದ ಆರೈಕೆ, ತೃತೀಯ ಹಂತದ ಆರೈಕೆ ಮತ್ತು ತುರ್ತು ಆರೋಗ್ಯ ಆರೈಕೆಗಳನ್ನು ಒದಗಿಸಲು ಸರ್ಕಾರವು ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆ.

ಈ ಆದೇಶದಲ್ಲಿ ವೈದ್ಯಕೀಯ ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳಿಗೆ ನೀಡುವ ಪ್ರೋತ್ಸಾಹ ಧನವನ್ನು ಆರೋಗ್ಯ ಕರ್ನಾಟಕ ಯೋಜನೆಯಡಿ ಪಡೆದುಕೊಂಡ ಮರುಪಾವತಿ ಮೊತ್ತದ ಶೇಕಡ 10 ಕ್ಕೆ ಸೀಮಿತಗೊಳಿಸಿದೆ. ಆದ್ದರಿಂದ, ಸರ್ಕಾರ ದಿ:21-04-2018 ರಂದು ಹೊರಡಿಸಲಾಗಿರುವ ಪರಿಷ್ಕೃತ ಮಾರ್ಗಸೂಚಿಗಳ ಕುರಿತ ಆದೇಶವನ್ನು ಹಿಂತೆಗೆದುಕೊಳ್ಳಲು ತೀರ್ಮಾನಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 66 ಸಿಜಿಇ 2017**

**ಬೆಂಗಳೂರು, ದಿನಾಂಕ:14-09-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ವೈದ್ಯಕೀಯ ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳಿಗೆ ನೀಡುವ ಪ್ರೋತ್ಸಾಹ ಧನವನ್ನು ಆರೋಗ್ಯ ಕರ್ನಾಟಕ ಯೋಜನೆಯಡಿ ಪಡೆದುಕೊಂಡ

.... 2

Scanned by CamScanner

ಮರುಪಾವತಿ ಮೊತ್ತದ ಶೇಕಡ 10 ಕ್ಕೆ ಸೀಮಿತಗೊಳಿಸಿರುವುದರಿಂದ, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಮುಖಾಂತರ ಅನುಷ್ಠಾನಗೊಳ್ಳುತ್ತಿದ್ದ ವಿವಿಧ ಯೋಜನೆಗಳಡಿಯಲ್ಲಿ, ಸರ್ಕಾರಿ ಆಸ್ಪತ್ರೆ ಮತ್ತು ಖಾಸಗಿ ಆಸ್ಪತ್ರೆಗಳಿಂದ ಸ್ವೀಕೃತವಾಗುವ ಹಣವನ್ನು ಬಳಕೆ ಮಾಡುವ ಬಗ್ಗೆ ಹೊರಡಿಸಲಾಗಿದ್ದ ಪರಿಷ್ಕೃತ ಮಾರ್ಗಸೂಚಿಗಳ ಕುರಿತ ದಿ:21-04-2017ರ ಸರ್ಕಾರದ ಆದೇಶವನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 504 ವೆಚ್ಚ-5/2018, ದಿ:03-08-2018ರಂದು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

14/9/18

(ಹೆಚ್.ಸಿ. ಹರ್ಷರಾಣಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಆರೋಗ್ಯ 1 ಮತ್ತು 2)

**ಇವರಿಗೆ:**

1. **ಆಯುಕ್ತರು,** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು-09.
2. **ಅಭಿಯಾನ ನಿರ್ದೇಶಕರು,** ಎನ್.ಹೆಚ್.ಎಂ, ಬೆಂಗಳೂರು
3. **ಕಾರ್ಯಕಾರಿ ನಿರ್ದೇಶಕರು,** ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬಿ.ಎಂ.ಟಿ.ಸಿ.-ಟಿ.ಟಿ.ಎಂ.ಸಿ. ಎ ಬ್ಲಾಕ್, ಶಾಂತಿನಗರ, ಕೆ.ಹೆಚ್.ರೋಡ್, ಬೆಂಗಳೂರು.
4. **ನಿರ್ದೇಶಕರು,** ಖಜಾನೆ ನಿರ್ದೇಶನಾಲಯ, ಬೆಂಗಳೂರು-01.
5. **ನಿರ್ದೇಶಕರು,** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು-09.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ-2ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ.(ವೆಚ್ಚ-5), ವಿಧಾನಸೌಧ, ಬೆಂಗಳೂರು.
4. ಉಪ ಕಾರ್ಯದರ್ಶಿ, ಆಂತರಿಕ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

Scanned by CamScanner